# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 657 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11.12.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಮೂಲಭೂತ ಸೌಕರ್ಯ ಇಲ್ಲದ ಅನುದಾನ ಸಹಿತ/ಅನುದಾನ ರಹಿತ ಶಾಲೆಗಳಲ್ಲಿ ಮೂಲಭೂತ ಕಲ್ಪಿಸಲು ಸರ್ಕಾರ ಎಷ್ಟು ಶಾಲೆಗಳಿಗೆ ಆದೇಶ ನೀಡಲಾಗಿತ್ತು; ಆ ಆದೇಶ ಪಾಲನೆಯಾಗಿದೆಯೇ; | ಖಾಸಗಿ ಅನುದಾನಿತ ಪ್ರೌಢಶಾಲೆ/ಕಾಲೇಜು/ ವಿದ್ಯಾಸಂಸ್ಥೆಗಳಿಗೆ ಅನುದಾನ ಸಂಹಿತೆಯನ್ವಯ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ವೇತನಾನುದಾನಕ್ಕೆ ಒಳಪಟ್ಟ ಸಿಬ್ಬಂದಿಗಳಿಗೆ ಮಾತ್ರ ಸರ್ಕಾರದಿಂದ ವೇತನಪಾವತಿಗಾಗಿ ಅನುದಾನ ಒದಗಿಸಲಾಗುತ್ತದೆ. ಆದರೆ, ಖಾಸಗಿ ಅನುದಾನಿತ ಅಥವಾ ಅನುದಾನರಹಿತ ಶಾಲೆಗಳ ಮೂಲಭೂತ ಸೌಕರ್ಯಗಳ ವೆಚ್ಚಕ್ಕಾಗಿ ಯಾವುದೇ ರೀತಿಯ ಅನುದಾನವನ್ನು ಸರ್ಕಾರದಿಂದ ಒದಗಿಸಲು ಅವಕಾಶವಿರುವುದಿಲ್ಲ. ಈ ಹಿನ್ನಲೆಯಲ್ಲಿ ಬೀದರ್ ಜಿಲ್ಲೆಯಲ್ಲಿ ಮೂಲಭೂತ ಸೌಕರ್ಯ ಇಲ್ಲದ ಅನುದಾನ ಸಹಿತ /ಅನುದಾನ ರಹಿತ ಶಾಲೆಗಳಲ್ಲಿ ಮೂಲಭೂತ ಕಲ್ಪಿಸಲು ಯಾವುದೇ ಆದೇಶ ನೀಡಿರುವುದಿಲ್ಲ. |
| ಆ) | ಆದೇಶ ಪಾಲನೆ ಮಾಡದೆ ಇರುವ ಶಾಲೆಗಳೆಷ್ಟು; ಅಂತಹ ಶಾಲೆಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮವೇನು; | ಮೇಲ್ಕಂಡ (ಅ) ಉತ್ತರದಿಂದಾಗಿ ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ) | ಮೂಲಭೂತ ಸೌಕರ್ಯ ಇಲ್ಲದ ಶಾಲೆಗಳನ್ನು ರದ್ದುಪಡಿಸಿ, ಅಲ್ಲಿರುವ ಸಿಬ್ಬಂದಿಗಳನ್ನು ಸಮೀಪದಲ್ಲಿರುವ ಸರ್ಕಾರಿ ಶಾಲೆಗಳಿಗೆ ವರ್ಗಾವಣೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ? | ಮೇಲ್ಕಂಡ (ಅ) ಉತ್ತರದಿಂದಾಗಿ ಪ್ರಶ್ನೆ ಉದ್ಭವಿಸುವುದಿಲ್ಲ. |

ಇಪಿ 265 ಯೋಸಕ 2023

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು